**ಪ್ರಧಾನ ಸಿ.ಜೆ. ಮತ್ತು ಜೆ ಎಂಎಫ್‌ಸಿ ನ್ಯಾಯಾಲಯ, ಮದ್ದೂರು**

ದಿಃ 13-11 -2025 ರಂದು ಸಾಕ್ಷಿಯನ್ನು ಕರೆದು ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ ಆರೋಪಿಯ ಪರ ಶ್ರೀ.ವೈಕೆ ವಕೀಲರವರಿಂದಃ**

ನನಗೆ 1 ಎಕರೆ ಜಮೀನು ಇದ್ದು, ಮತ್ತೊಂದು ಎಕರೆಯನ್ನು ಮಾರಾಟ ಮಾಡಿದ್ದೇವೆ. ಸದರಿ 1 ಎಕರೆಯಿಂದ ವಾರ್ಷಿಕ 25-30 ಸಾವಿರ ಆದಾಯ ಬರಬಹುದು ಎಂದರೆ ಸರಿ. ಅದನ್ನು ಹೊರತುಪಡಿಸಿ ಬೇರೆ ಯಾವುದೇ ಆದಾಯ ಇಲ್ಲ ಎಂದರೆ ಸರಿ. ಸದರಿ ಜಮೀನಿನ ಮೇಲೆ ಸೊಸೈಟಿಯಿಂದ ಸಾಲ ಪಡೆದಿದ್ದೇವೆಂದರೆ ಸರಿಯಲ್ಲ. ನನ್ನ ಗಂಡ ಸಾಲವನ್ನು ಆರೋಪಿಗೆ ನೀಡಿಲ್ಲದಿದ್ದರೂ ನಾನು ಸುಳ್ಳು ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಆರೋಪಿಯು ಸಾಲ ಕೇಳಲು ಒಬ್ಬರೇ ಬಂದಿದ್ದು, ಸದರಿ ವೇಳೆಯಲ್ಲಿ ನನ್ನ ಭಾವನಾದ ಚಿಕ್ಕತಮ್ಮೇಗೌಡ ಇದ್ದರು. ಸದರಿ ವಿಚಾರವನ್ನು ಪ್ರಮಾಣ ಪತ್ರದಲ್ಲಿ ಹೇಳಿದ್ದೇನೆ. ಸದರಿಯವರನ್ನು ಸಾಕ್ಷಿ ವಿಚಾರಣೆ ಮಾಡಲು ತೊಂದರೆ ಇಲ್ಲ. ನಮ್ಮ ಮತ್ತು ಆರೋಪಿಯ ಮಧ್ಯೆ ಯಾವುದೇ ವ್ಯವಹಾರ ಆಗದೇ ಇದ್ದರೂ ಕೂಡ ಆರೋಪಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಆರೋಪಿಯ ದೂರವಾಣಿ ನಂಬರ್ ನನಗೆ ಗೊತ್ತಿಲ್ಲ. ಉದ್ದೇಶಪೂರ್ವಕವಾಗಿ ಸದರಿಯವರ ದೂರವಾಣಿ ನಂಬರ್ ನ್ನು ನಮೂದಿಸಿಲ್ಲ ಎಂದರೆ ಸರಿಯಲ್ಲ. ಆರೋಪಿಯವರು ಊರಿನಲ್ಲಿ ಇಲ್ಲದ ಸಮಯವನ್ನು ನೋಡಿಕೊಂಡು ಸುಳ್ಳು ಪ್ರಕರಣ ದಾಖಲಿಸಿದ್ದೇವೆಂದರೆ ಸರಿಯಲ್ಲ. 3 ಲಕ್ಷ ಹಣ ಇತ್ತು ಎಂದು ತೋರಿಸಲು ದಾಖಲಾತಿ ಇಲ್ಲ. ನಮ್ಮ ಬಳಿ ಪಡಿತರ ಚೀಟಿ ಇದೆ. ನಮಗೆ 3 ಲಕ್ಷ ಸಾಲನೀಡುವ ಸಾಮರ್ಥ್ಯ ಇಲ್ಲ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ಜಮೀನು ಮಾರಾಟ ಮಾಡಿದ್ದೇವು ಎನ್ನುತ್ತಾರೆ. ಸದರಿ ಜಮೀನನ್ನು ಸಾಲ ತೀರಿಸಲು ಮಾರಾಟ ಮಾಡಿದ್ದೇವೆಂದರೆ ಸಾಕ್ಷಿ ಮಗಳ ಮದುವೆ ಮಾಡಲು ಮಾರಾಟ ಮಾಡಿದ್ದೇವೆ ಎನ್ನುತ್ತಾರೆ. ಆರೋಪಿಗೆ ತೊಂದರೆ ಕೊಡಬೇಕೆಂದು ಸುಳ್ಳು ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ

(ಶ್ರೀಮತಿ ನಳಿನ ಎಸ್.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು,
ಮದ್ದೂರು